ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ವಾರ್ತೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 18/09/2019

# ಅನರ್ಹ ಶಾಸಕರ ಅರ್ಜಿ ವಿಚಾರಣೆ: ಜಡ್ಜ್ ಹಿಂದಕ್ಕೆ

## ವಿಚಾರಣೆ 23ರ ಸೋಮವಾರಕ್ಕೆ ಮುಂದೂಡಿಕೆ

**ನವದೆಹಲಿ:** ಏನಾದರೊಂದು ತೀರ್ಪು ಲಭ್ಯವಾಗುತ್ತದೆ ಎಂದು ಭಾರೀ ನಿರೀಕ್ಷೆಯಲ್ಲಿದ್ದ ಕಾಂಗ್ರೆಸ್ ಹಾಗೂ ಜೆಡಿಎಸ್‌ನ 17 ಅನರ್ಹ ಶಾಸಕರಿಗೆ ನಿರಾಸೆ ಉಂಟಾಗಿದೆ. ಪ್ರಕರಣದ ವಿಚಾರಣೆ ನಡೆಸಬೇಕಿದ್ದ ಸುಪ್ರೀಂಕೋರ್ಟ್‌ನ ತ್ರಿಸದಸ್ಯ ಪೀಠದ ಮೂವರು ನ್ಯಾಯಮೂರ್ತಿಗಳ ಪೈಕಿ ಒಬ್ಬರು ಹಿಂದೆ ಸರಿದ ಕಾರಣ, ಅನರ್ಹ ಶಾಸಕರು ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಸೆ.23 (ಸೋಮವಾರ)ಕ್ಕೆ ಮುಂದೂಡಲಾಗಿದೆ.

ಸ್ಪೀಕರ್ ಕ್ರಮ ಪ್ರಶ್ನಿಸಿ ಅನರ್ಹ ಶಾಸಕರು ಸಲ್ಲಿಸಿದ್ದ ಅರ್ಜಿಯು ನ್ಯಾ. ಎನ್.ವಿ. ರಮಣ, ನ್ಯಾ. ಮೋಹನ್ ಶಾಂತನಗೌಡರ್ ಮತ್ತು ನ್ಯಾ. ಅಜಯ್ ರಸ್ತೋಗಿ ಅವರನ್ನು ಒಳಗೊಂಡ ತ್ರಿಸದಸ್ಯ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಂದಿತ್ತು. ಆದರೆ ನ್ಯಾ. ಶಾಂತನಗೌಡರ್ ಪ್ರಕರಣದ ವಿಚಾರಣೆಯಿಂದ ಹಿಂದೆ ಸರಿದರು. ಈ ಹಿನ್ನೆಲೆಯಲ್ಲಿ ನ್ಯಾ.ಎನ್.ವಿ.ರಮಣ ಅವರು ಅರ್ಜಿಯ ವಿಚಾರಣೆಯನ್ನು ಸೆ.23ಕ್ಕೆ ಮುಂದೂಡಿದರು. ಪ್ರಕರಣದ ವಿಚಾರಣೆ ಆರಂಭಗೊಳ್ಳುತ್ತಿದ್ದಂತೆಯೇ ನ್ಯಾ. ಶಾಂತನಗೌಡರ್ ತಾವು ವಿಚಾರಣೆಯಿಂದ ಹಿಂದೆ ಸರಿಯುತ್ತಿರುವುದಾಗಿ ಪ್ರಕಟಿಸಿದರು.

## ಉಪಚುನಾವಣೆ: ಆಯೋಗಕ್ಕೆ ವಿಧಾನಸಭೆ ಕಾರ್ಯದರ್ಶಿ ಪತ್ರ

ಕ.ಪ್ರ 18/9/19

**ಬೆಂಗಳೂರು:** ವಿಧಾನಸಭೆ ಸದಸ್ಯತ್ವದಿಂದ ಅನರ್ಹಗೊಂಡಿರುವ 17 ಶಾಸಕರ ಸ್ಥಾನಗಳಿಗೆ ಚುನಾವಣೆ ನಡೆಸಬೇಕಾಗಿದೆ ಎಂದು ವಿಧಾನಸಭೆಯ ಕಾರ್ಯದರ್ಶಿ ಕೇಂದ್ರ ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಿದ್ದಾರೆ. ವಿಧಾನಸಭೆ ಮತ್ತು ವಿಧಾನ ಪರಿಷತ್ ಸದಸ್ಯತ್ವ ಖಾಲಿ ಇದ್ದರೆ ಅವುಗಳ ಬಗ್ಗೆ ಪ್ರತಿ ತಿಂಗಳು ಮಾಹಿತಿಯನ್ನು ಕೇಂದ್ರ ಚುನಾವಣಾ ಆಯೋಗಕ್ಕೆ ಸಲ್ಲಿಸಬೇಕಾಗುತ್ತದೆ. ಇದರ ಅನ್ವಯ ವಿಧಾನಸಭೆ ಕಾರ್ಯದರ್ಶಿ ಕೆ.ಆರ್.ವಿಶಾಲಾಕ್ಷಿ ಅವರು ಪತ್ರ ಬರೆದಿದ್ದಾರೆ. ವಿಧಾನಸಭೆ ಸಚಿವಾಲಯದ ಪತ್ರ ಆಧರಿಸಿ ಚುನಾವಣಾ ಆಯೋಗ ಖಾಲಿ ಇರುವ ವಿಧಾನಸಭೆ ಅಥವಾ ವಿಧಾನ ಪರಿಷತ್ ಸ್ಥಾನಗಳಿಗೆ ಚುನಾವಣೆ ನಡೆಸಲಿದೆ.

8